ಕರ್ನಾಟಕ ಸರ್ಕಾರ

ನಿರ್ದೇಶಕರ ಕಛೇರಿ, ಪದವಿ ಪೂರ್ವ ಶಿಕ್ಷಣ ಇಲಾಖೆ, 18 ನೇ ಅಡ್ಡ ರಸ್ತೆ, ಮಲ್ಲೇಶ್ವರಂ, ಬೆಂಗಳೂರು-12

email id: commissioner.pue@gmail.com Ph. No. :080-23361857, 23361858* Fax-080-23361852

ಸಂಖ್ಯೆ: ಪಪೂಶಿಇ/19/ಸಿಬ್ಬಂದಿ/ಸಿ.ಆರ್-9/ಎನ್ಒಸಿ/2017-18 ದಿನಾಂಕ:21/07/2017

## ಜ್ಞಾಪನ

ವಿಷಯ: ಕರ್ನಾಟಕ ಲೋಕ ಸೇವಾ ಆಯೋಗದಿಂದ ಆಹ್ವಾನಿಸಿರುವ ಕನ್ನಡ ಭಾಷಾ ಶಿಕ್ಷಕರು ಮತ್ತು ನಿಲಯ ಪಾಲಕರ ಹುದ್ದೆಗಳಿಗೆ ಅರ್ಜಿ ಸಲ್ಲಿಸಲು ಅನುಮತಿ ನೀಡುವ ಕುರಿತು.

ಉಲ್ಲೇಖ: 01. ಉಪ ನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ, ಯದಗಿರಿ ರವರ ಪತ್ರ ಸಂಖ್ಯೆ: ಪ.ಪೂ.ಶಿ.ಇ/ಉ.ನಿ.ಕೆ ವಾಯ್/ಸ್ವ.ಪ.ಅ/2017/1543 ದಿನಾಂಕ: 13-07-2017

******

ಉಪ ನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ, ಯಾದಗಿರಿ ರವರ ಉಲ್ಲೇಖಿತ ಪತ್ರದಂತೆ ಶ್ರೀ ಶರಣಬಸವ, ಪ್ರಥಮ ದರ್ಜೆ ಸಹಾಯಕರು, ಉಪ ನಿರ್ದೇಶಕರ ಕಛೇರಿ, ಯಾದಗಿರಿ ಇವರು ಕರ್ನಾಟಕ ಲೋಕ ಸೇವಾ ಆಯೋಗದಿಂದ ಆಹ್ವಾನಿಸಿರುವ ಕನ್ನಡ ಭಾಷಾ ಶಿಕ್ಷಕರು ಮತ್ತು ನಿಲಯ ಪಾಲಕರ ಹುದ್ದೆಗಳಿಗೆ ಅರ್ಜಿ ಸಲ್ಲಿಸಲು ಅನುಮತಿ ಕೋರಿರುತ್ತಾರೆ. ಸದರಿ ಪ್ರಸ್ತಾವನೆಯನ್ನು ಪರಿಶೀಲಿಸಿ, ಈ ಕೆಳಕಂಡ ಷರತ್ತುಗಳಿಗೆ ಒಳಪಟ್ಟು ಅನುಮತಿ ನೀಡಿದೆ.

| ಕ್ರ ಸಂ | ಹುದ್ದೆ ಹೆಸರು ಮತ್ತು ವಿಳಾಸ | ಅನುಮತಿ ಕೋರಲಾದ ಹುದ್ದೆ |
|---|---|---|
| 1 | ಶ್ರೀ ಶರಣಬಸವ,<br>ಪ್ರಥಮ ದರ್ಜೆ ಸಹಾಯಕರು,<br>ಉಪ ನಿರ್ದೇಶಕರ ಕಛೇರಿ, ಯಾದಗಿರಿ.<br>ಯಾದಗಿರಿ ಜಿಲ್ಲೆ. | ಕೆ.ಪಿ.ಎಸ್.ಸಿ ಯಿಂದ ಆಹ್ವಾನಿಸಿರುವ ಮೋರಾರ್ಜಿ ದೇಸಾಯಿ, ಕಿತ್ತೂರು ರಾಣಿ ಚೆನ್ನಮ್ಮ, ಏಕಲವ್ಯ ಮತ್ತು ಅಟಲ್ ಬಿಹಾರಿ ವಾಜಪೇಯಿ ಮಾದರಿ ವಸತಿ ಶಾಲೆಗಳಲ್ಲಿನ ಕನ್ನಡ ಬಾಷಾ ಶಿಕ್ಷಕರು ಮತ್ತು ನಿಲಯ ಪಾಲಕರ ಹುದ್ದೆಗಳಿಗೆ. |

ಷರತ್ತುಗಳು:

1. ಸದರಿ ನೌಕರರು ಪರೀಕ್ಷೆಗೆ ಸಂಬಂಧಿಸಿದಂತೆ ಅಧ್ಯಯನವನ್ನು ತಮ್ಮ ಸ್ವಂತ ಖರ್ಚಿನಲ್ಲಿ ಕೈಗೊಳ್ಳತಕ್ಕದ್ದು. ಸದರಿಯವರ ಪರೀಕ್ಷೆಯ ಅಧ್ಯಯನದ ನಿಮಿತ್ತ ಸರ್ಕಾರ/ಇಲಾಖೆಗೆ ಯಾವುದೇ ಆರ್ಥಿಕ ಹೊರೆ ಉಂಟಾಗತಕ್ಕದ್ದಲ್ಲ.
2. ಕಛೇರಿ ಕೆಲಸ ಕಾರ್ಯಗಳಿಗೆ ತೊಂದರೆ ಉಂಟಾಗದಂತೆ ಬಿಡುವಿನ ವೇಳೆಯಲ್ಲಿ ಸದರಿ ಪರೀಕ್ಷೆಯ ಅಧ್ಯಯನಕ್ಕೆ ಬೇಕಾದ ಸಿದ್ಧತೆ ಮಾಡಿಕೊಳ್ಳತಕ್ಕದ್ದು.
3. ಪರೀಕ್ಷೆಯ ಅಧ್ಯಯನದ ನಿಮಿತ್ತ ವರ್ಗಾವಣೆ, ಕೋರುವಂತಿಲ್ಲ ಅಥವಾ ಅವರ ಪರೀಕ್ಷೆಯ ಅಧ್ಯಯನ ಸರ್ಕಾರದ/ಇಲಾಖೆಯ ವರ್ಗಾವಣೆಗೆ ಅಡ್ಡಿಬರುವಂತಿಲ್ಲ.
4. ಸದರಿ ನೌಕರರು ಬೇರೆ ಯಾವುದೇ ಇಲಾಖೆಯ ಹುದ್ದೆಗೆ ಆಯ್ಕೆಯಾದಲ್ಲಿ ಈಗ ಕಾರ್ಯ ನಿರ್ವಹಿಸುತ್ತಿರುವ ಹುದ್ದೆಯಿಂದ ಬಿಡುಗಡೆ ಹೊಂದುವ ಮೊದಲು ಇಲಾಖೆಯ ಅನುಮತಿ ಪಡೆಯುವುದು.

21/7/17

ಜಂಟಿ ನಿರ್ದೇಶಕರು(ಆಡಳಿತ)

ಪದವಿ ಪೂರ್ವ ಶಿಕ್ಷಣ ಇಲಾಖೆ.

ಪ್ರತಿಗಳು: 1. ಉಪ ನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ. ಯಾದಗಿರಿ.

2. ಸಹಾಯಕ ನಿರ್ದೇಶಕರು, ಇ-ಆಡಳಿತ ಇವರಿಗೆ ಇಲಾಖೆಯ ಅಂತರ್ಜಾಲದಲ್ಲಿ ಅಳವಡಿಸಲು.

3. ಸಂಬಂಧಿಸಿದ ನೌಕರರಿಗೆ.

4. ಕಛೇರಿ ಪ್ರತಿ.